# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

www.gadikannadiga.com

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:107 RNI NO.KAR KAN/2003/10452:No./PMG/KA/NK/BM/743/24-26 ಬುಧವಾರ ದಿನಾಂಕ: 20-03-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


## ಬೆಳಗಾವಿ ತಾಲ್ಲೂಕಿನಲ್ಲಿ ಮತ ಜಾಗೃತಿ ಅಭಿಯಾನಕ್ಕೆ ಚಾಲನೆ

ಬೆಳಗಾವಿ,ಮಾ.19 : ಬೆಳಗಾವಿ ತಾಲ್ಲೂಕ ಪಂಚಾಯತ ಆವರಣದಲ್ಲಿ ಸೋಮವಾರ (ಮಾರ್ಚ 19) ರಂದು ಸಹಾಯಕ ಚುನಾವಣಾಧಿಕಾರಿಗಳಾದ ಸಿ.ಡಬ್ಲ್ಯೂ ಶೇಕಿಲ್ ಅಹಮ್ಮದ್, ತಹಶೀಲ್ದಾರ ಹಾಗೂ ತಾಲ್ಲೂಕಾ ದಂಡಾಧಿಕಾರಿಗಳಾದ ಸಿದ್ದರಾಯ ಭೋಸಗಿ ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಮರಡ್ಡಿ ಪಾಟೀಲ್ ಅವರು ಸಹಿ ಮತ್ತು ಸೇಲ್ಫಿ ಪಾಯಿಂಟ್ ನಲ್ಲಿ ಫೋಟೋ ತೆಗೆದುಕೊಳ್ಳುವ ಮೂಲಕ ಮತ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಿದರು.

ಸಹಾಯಕ ನಿರ್ದೇಶಕರು (ಪ.ರಾ) ಗಣೇಶ ಕೆ.ಎಸ್, ಸಹಾಯಕ ನಿರ್ದೇಶಕರು (ಅಕ್ಷರ ದಾಸೋಹ) ರಾಮನಗೌಡ ಮುದಕನಗೌಡರ, ತಾಲ್ಲೂಕ ಪಂಚಾಯತ ಸಿಬ್ಬಂದಿಗಳು ಸೇರಿದಂತೆ ವಿವಿಧ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಇದ್ದರು.

## ಗ್ರಾಮೀಣ ಪ್ರದೇಶ ಕುಡಿಯುವ ನೀರಿನ ಸಮಸ್ಯೆ; ಸಹಾಯವಾಣಿ ಕೇಂದ್ರ ಆರಂಭ

ಬೆಳಗಾವಿ,ಮಾ.19 : ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗಿದ್ದರಿಂದ ಗ್ರಾಮೀಣ ಪ್ರದೇಶದ ಜನರಿಗೆ ಕುಡಿಯುವ ನೀರಿನ ವ್ಯವಸ್ಥೆ ನಿರ್ವಹಿಸಲು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ಬೆಳಗಾವಿ ಹಾಗೂ ಚಿಕ್ಕೋಡಿ 24*7 ಕಂಟ್ರೋಲ್ ರೂಮ್‌ನ್ನು ತೆರೆಯಲಾಗಿರುತ್ತದೆ. ಬೆಳಗಾವಿ ವಿಭಾಗದ ವ್ಯಾಪ್ತಿಯಲ್ಲಿ ಬರುವ 06 ತಾಲೂಕುಗಳ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯತಿಗಳಲ್ಲಿ ಇರುವ ಕುಡಿಯುವ ನೀರಿನ ಸಮಸ್ಯೆ ಬಗ್ಗೆ ಸಹಾಯವಾಣಿ ಕೇಂದ್ರ ದೂರವಾಣಿ 0831–2420835 ಗೆ ಹಾಗೂ ಚಿಕ್ಕೋಡಿ ವಿಭಾಗದ ವ್ಯಾಪ್ತಿಯಲ್ಲಿ ಬರುವ 08 ತಾಲೂಕುಗಳ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯತಿಗಳಲ್ಲಿ ಇರುವ ಕುಡಿಯುವ ನೀರಿನ ಸಮಸ್ಯೆ ಬಗ್ಗೆ ಸಹಾಯವಾಣಿ ಕೇಂದ್ರ ದೂರವಾಣಿ 08338–275101 ಗೆ ಸಂಪರ್ಕಿಸಬೇಕೆಂದು ಬೆಳಗಾವಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬೆಳಗಾವಿ ಸುವರ್ಣ ಸೌಧಕ್ಕೆ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಸಭಾಧ್ಯಕ್ಷ ಯು.ಟಿ.ಖಾದರ್ ಭೇಟಿ

# ಸುವರ್ಣಸೌಧ ಸಮರ್ಪಕ ನಿರ್ವಹಣೆಗೆ ಸೂಚನೆ



ಬೆಳಗಾವಿ,ಮಾ.19: ಸುವರ್ಣ ವಿಧಾನಸೌಧದ ನಿರ್ವಹಣೆಯಲ್ಲಿ ಈ ಹಿಂದೆ ಕಂಡುಬಂದಿದ್ದ ಕೆಲವೊಂದು ನ್ಯೂನತೆಗಳನ್ನು ಸರಿಪಡಿಸಲು ನೀಡಲಾಗಿರುವ ನಿರ್ದೇಶನಗಳನ್ನು ಸಮರ್ಪಕವಾಗಿ ಜಾರಿಗೊಳಿಸಬೇಕು ಎಂದು ವಿಧಾನಪರಿಷತ್ ಮಾನ್ಯ ಸಭಾಪತಿ ಬಸವರಾಜ ಹೊರಟ್ಟಿ ಅವರು ಸೂಚನೆ ನೀಡಿದರು.

ಪೂರ್ವನಿಗದಿತ ಕಾರ್ಯಕ್ರಮದಂತೆ ಮಂಗಳವಾರ(ಮಾ.19) ಭೇಟಿ ನೀಡಿದ ವಿಧಾನ ಪರಿಷತ್ತಿನ ಸಭಾಪತಿ ಹಾಗೂ ವಿಧಾನಸಭೆ ಸಭಾಧ್ಯಕ್ಷರು ಬೆಳಗಾವಿ ಸುವರ್ಣ ವಿಧಾನಸೌಧದ ನಿರ್ವಹಣೆಯನ್ನು ಪರಿಶೀಲಿಸಿದರು. 2023 ರ ಡಿಸೆಂಬರ್ ಮಾಹೆಯಲ್ಲಿ ಜರುಗಿದ ವಿಧಾನಮಂಡಳದ ಚಳಿಗಾಲ ಅಧಿವೇಶನದ ಸಂದರ್ಭದಲ್ಲಿ ಪರಿಷತ್ ಹಾಗೂ ವಿಧಾನಸಭೆಯ ಸಭಾಂಗಣ ನಿರ್ವಹಣೆಯ ಕುರಿತು ನೀಡಲಾಗಿರುವ ನಿರ್ದೇಶನಗಳನ್ನು ಪಾಲಿಸಬೇಕು ಎಂದರು.

**ಅಧಿಕಾರಿಗಳಿಗೆ ಅಭಿನಂದನೆ:**

ಡಿಸೆಂಬರ್ 2003 ರಲ್ಲಿ ನಡೆದ ವಿಧಾನಮಂಡಳ ಅಧಿವೇಶನದ ಯಶಸ್ವಿಗೆ ವಿವಿಧ ಸಮಿತಿಗಳ ಮುಖ್ಯಸ್ಥರು ಹಾಗೂ ಸದಸ್ಯರುಗಳು ಶ್ರಮಿಸುವ ಮೂಲಕ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ್ದಾರೆ ಎಂದು ಸಭಾಪತಿ ಹೊರಟ್ಟಿ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಯಾವುದೇ ಅನಾನುಕೂಲ ಆಗದಂತೆ ಅಧಿವೇಶನವನ್ನು ಅಚ್ಚುಕಟ್ಟಾಗಿ ಹಾಗೂ ಯಶಸ್ವಿಯಾಗಿ ನಡೆಸಿದ್ದು, ಅವರೆಲ್ಲರೂ ಅಭಿನಂದನಾರ್ಹರು ಎಂದರು. ಬೆಳಗಾವಿಯಲ್ಲಿ ಪ್ರತಿವರ್ಷ ಅಧಿವೇಶನವು ಇದೇ ರೀತಿ ಯಶಸ್ವಿಯಾಗಿ ನಡೆಯಬೇಕು ಎಂಬುದು ನಮ್ಮ ಆಶಯವಾಗಿದೆ ಎಂದು ತಿಳಿಸಿದರು. ಬೆಳಗಾವಿಯಲ್ಲಿ ಇತ್ತೀಚೆಗೆ ನಡೆದ ಅಧಿವೇಶನವು ಅತ್ಯಂತ ಯಶಸ್ವಿಯಾಗಿದ್ದು, ಅತೀ ಹೆಚ್ಚು ಚರ್ಚೆ ನಡೆದಿರುವುದರ ಜತೆಗೆ ಅತೀ ಹೆಚ್ಚು ಮಸೂದೆಗಳು ಕೂಡ ಅಂಗೀಕರಿಸಲಾಗಿರುತ್ತದೆ ಎಂದು ವಿಧಾನಸಭೆ ಸಭಾಧ್ಯಕ್ಷರಾದ ಯು.ಟಿ.ಖಾದರ್ ಹೇಳಿದರು. ಜಿಲ್ಲಾಧಿಕಾರಿ ನಿತೇಶ್ ಪಾಟೀಲ ನೇತೃತ್ವದಲ್ಲಿ ಜಿಲ್ಲಾಡಳಿತ, ಪೊಲೀಸ್ ಸೇರಿದಂತೆ ಸಾವಿರಾರು ಜನರು ಅತ್ಯುತ್ತಮವಾಗಿ ಕಾರ್ಯನಿರ್ವಹಿಸುವ ಮೂಲಕ ಅಧಿವೇಶನ ಯಶಸ್ವಿಗೊಳಿಸಿದ್ದರಿಂದ ಪ್ರತಿಯೊಬ್ಬರಿಗೂ ಅಭಿನಂದನೆ ಸಲ್ಲಿಸಿದರು. ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಲ್ಲಿಕಾರ್ಜುನ ಕಲಾದಗಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕರಾದ ಶ್ರೀಶೈಲ್ ಕಂಕಣವಾಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪ ನಿರ್ದೇಶಕರಾದ ವಿದ್ಯಾವತಿ ಭಜಂತ್ರಿ ಮತ್ತಿತರರು ತಮ್ಮ ಅನಿಸಿಕೆ ಹೇಳಿದರು. ಕರ್ನಾಟಕ ವಿಧಾನಸಭಾ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ, ವಿಧಾನಸಭೆ ಕಾರ್ಯದರ್ಶಿ ಮಹಾಲಕ್ಷ್ಮೀ, ಲೋಕೋಪಯೋಗಿ ಇಲಾಖೆಯ ಅಧೀಕ್ಷಕ ಎಂಜಿನಿಯರ್ ಅರುಣಕುಮಾರ್ ಪಾಟೀಲ ಉಪಸ್ಥಿತರಿದ್ದರು.

# ಸರ್ವತೋಮುಖ ಬೆಳವಣಿಗೆಗೆ ಕೊಪ್ಪಳ ವಿಶ್ವ ವಿದ್ಯಾಲಯದ ಸನ್ನದ್ಧ: ಕುಲಪತಿ ಮೇತ್ರಿ



ಕೊಪ್ಪಳ, ಮಾರ್ಚ್ 19 :ವಿಜಯನಗರ – ಕೊಪ್ಪಳ ಕನ್ನಡ ನಾಡಿಗೆ ವಿಶೇಷ ನೆರವಾಗಿದೆ. ಇಲ್ಲಿನ ಸಾಮ್ರಾಟ್ ಅಶೋಕನ ಮೂಲಕ ರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡಿದೆ. ಧರ್ಮ ಜ್ಞಾನ ಕೇಂದ್ರಗಳು ಆಶ್ರಯಿಸಿ, ಧರ್ಮವನ್ನು ಬಿತ್ತುತ್ತಿದ್ದಾರೆ. ಕೊಪ್ಪಳವು ಚಾರಿತ್ರಿಕ ಹಿನ್ನೆಲೆ ಹೊಂದಿದೆ ಎಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಕೆ.ಎಮ್.ಮೇತ್ರಿ ಅವರು ಅಭಿಪ್ರಾಯಪಟ್ಟರು.

ಕೊಪ್ಪಳ ವಿಶ್ವ ವಿದ್ಯಾಲಯದಲ್ಲಿ ಮಂಗಳವಾರ ನಡೆದ ಪ್ರಥಮ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮಕ್ಕೆ ಜ್ಯೋತಿ ಬೆಳಗಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಕೊಪ್ಪಳವು ಸಹ ಕನ್ನಡಕ್ಕೆ ವಿಶೇಷ ಸ್ಥಾನಮಾನ ನೀಡಿದ ಭೂಮಿಯಾಗಿದೆ. ಆರ್ಥಿಕವಾಗಿ ಹಾಗೂ ಶೈಕ್ಷಣಿಕವಾಗಿ ಹಿಂದುಳಿದಿದ್ದೂ, ಹಾಗಾಗಿ ಆರ್ಥಿಕವಾಗಿ ಹಾಗೂ ಶೈಕ್ಷಣಿಕವಾಗಿ ಮುನ್ನುಗ್ಗಲು ಹಾಗೂ ಈ ಭಾಗದ ಸರ್ವತೋಮುಖ ಬೆಳವಣಿಗೆಗೆ ಕೊಪ್ಪಳ ವಿಶ್ವ ವಿದ್ಯಾಲಯದ ಸನ್ನದ್ಧವಾಗಿದೆ. ಈ ಭಾಗದ ಶಿಕ್ಷಣ ಇನ್ನಷ್ಟು ಬೆಳವಣಿಗೆ ಯಾಗಲಿ ಎಂದರು.

ಗದುಗಿನ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯುತ್ ರಾಜ್ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ವಿಷ್ಣುಕಾಂತ್. ಎಸ್.ಚಟಪಲ್ಲಿ ಮಾತನಾಡಿ, ಕೊಪ್ಪಳ ವಿಶ್ವ ವಿದ್ಯಾಲಯದಿಂದ ಗ್ರಾಮೀಣ ಪ್ರದೇಶದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಸಿಗುವಂತಾಗಲಿ ಎಂದರು.

ಗೊಟಗೋಡಿ, ಶಿಗ್ಗಾಂವಿಯ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಟಿ.ಎಂ.ಭಾಸ್ಕರ್ ಮಾತನಾಡಿ, ಸಂವಿಧಾನ ಆಶಯವನ್ನು ಜಾರಿಗೆ ತರುವ ಕೆಲಸವಾಗಬೇಕು. ಸಂವಿಧಾನ ಆಶಯದಂತೆ ನಾವೆಲ್ಲರೂ ನಡೆಯೋಣ ಎಂದರು.

ಹಾವೇರಿ ವಿಶ್ವ ವಿದ್ಯಾಲಯದ ಕುಲಪತಿಗಳಾದ ಪ್ರೊ.ಸುರೇಶ ಎಚ್. ಜಂಗಮಶೆಟ್ಟಿ ಮಾತನಾಡಿ, ದೇಶದಲ್ಲಿ ಕೊಪ್ಪಳ ವಿಶ್ವ ವಿದ್ಯಾಲಯ ಉತ್ತುಂಗಕ್ಕೆ ಏರಬೇಕು. ವಿಶ್ವ ವಿದ್ಯಾಲಯದ ಉದ್ದೇಶ ಈಡೇರಲಿ ಎಂದರು.

ಬೀದರ ವಿಶ್ವ ವಿದ್ಯಾಲಯದ ಕುಲಪತಿಗಳಾದ ಪ್ರೊ.ಬಿ.ಎಸ್.ಬಿರಾದಾರ ಮಾತನಾಡಿ, ಜಿಲ್ಲೆಯ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಸಿಗಬೇಕು ಎಂಬ ಉದ್ದೇಶದಿಂದ ವಿಶ್ವ ವಿದ್ಯಾಲಯ ಸ್ಥಾಪನೆಯಾಗಿದೆ. ಹೊಸ ವಿಶ್ವ ವಿದ್ಯಾಲಯದ ಸ್ನಾತಕೋತ್ತರ ಶಿಕ್ಷಣದ ಜೊತೆಗೆ ಉದ್ದೇಶ ಕೌಶಲ್ಯ ಭರಿತವಾದ ಕೋರ್ಸುಗಳನ್ನು ಪ್ರಾರಂಭಿಸಿ ಆ ಭಾಗದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಸಿಗಬೇಕು, ಅವರರವರ ಭವಿಷ್ಯ ರೂಪಿಸಿ ಕೊಳ್ಳಬೇಕು. ಹೊಸ ವಿಶ್ವ ವಿದ್ಯಾಲಯದ ನಾಡಿನಲ್ಲಿಯೇ ಹೆಸರುವಾಸುವಂತಾಗಲಿ ಮಾಡೋಣ ಎಂದರು

ಕೊಡಗು ವಿಶ್ವ ವಿದ್ಯಾಲಯದ ಕುಲಪತಿಗಳಾದ ಪ್ರೊ.ಅಶೋಕ ಸಂಗಪ್ಪ ಆಲೂರು ಮಾತನಾಡಿ, ಈ ಭಾಗವು ಕಲ್ಯಾಣ ಕರ್ನಾಟಕ ಸಂತ ಮಹಾಂತರ ನಾಡಗಿದೆ. ಕೊಪ್ಪಳ ವಿಶ್ವ ವಿದ್ಯಾಲಯ ಒಂದು ವರ್ಷಗಳ ಗುಣಮಟ್ಟದ ಶಿಕ್ಷಣ ನೀಡಿದ ಸಾರ್ಥಕ ಗಳಿಗೆಯಾಗಿದೆ. ವಿದ್ಯಾರ್ಥಿಗಳ ಮನಸ್ಸಿನಲ್ಲಿ ಅತ್ಯುತ್ತಮವಾದ ಬೀಜ ಬಿತ್ತುವ ಮೂಲಕ ಕಳೆ, ಕಸವನ್ನೂ ಕಿತ್ತು ತೆಗೆದು, ಸಮೃದ್ಧಿಯ ನಾಗರಿಕರಾಗಿ ರೂಪಿಸುವ ಕನಸು ವಿಶ್ವ ವಿದ್ಯಾಲಯದ ಹೊಂದಿದೆ. ಇಲ್ಲಿನ ಶಿಕ್ಷಕರು ವಿದ್ಯಾರ್ಥಿಗಳಿಗೆ ಸೂಕ್ತವಾದ ಜ್ಞಾನ ನೀಡಬೇಕಿದೆ. ಇಲ್ಲಿರುವ ವಿದ್ಯಾರ್ಥಿಗಳು ನಾಡಿನ ಸಂತರು, ಜ್ಞಾನಿಗಳು, ಪಂಡಿತರು, ದೇಶವನ್ನು ಆಳುವ ನಾಗರಿಕರಾಗಲು ಇಲ್ಲಿನ ಪ್ರಾಧ್ಯಾಪಕರು ಹಾಗೂ ಶಿಕ್ಷಕರು ಶ್ರಮಿಸಬೇಕು ನಾವೆಲ್ಲರೂ ಚಲಾವಣೆಯ ನಾಣ್ಯ ಹಾಗೂ ನೋಟುಗಳು ವಂತಾಗಬೇಕು. ವಿಶ್ವ ವಿದ್ಯಾಲಯದ ಕುಲಪತಿ ಪ್ರೊ.ಬಿ.ಕೆ.ರವಿ ಅವರು ಕ್ರಿಯಾಶೀಲ ರಾಗಿದ್ದು, ಅವರನ್ನು ನಿವೆಲ್ಲರೂ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು. (2 ನೇ ಪುಟಕ್ಕೆ)

# ಎಸ್.ಎಸ್.ಎಲ್.ಸಿ. ಪರೀಕ್ಷೆ ವ್ಯವಸ್ಥಿತವಾಗಿ ಹಾಗೂ ಅಚ್ಚುಕಟ್ಟಾಗಿ ಜರುಗಿಸಲು ಕ್ರಮ ವಹಿಸಿ




ಗದಗ ಮಾರ್ಚ 19: ಜಿಲ್ಲೆಯಲ್ಲಿ ಮಾರ್ಚ 25 ರಿಂದ ಎಪ್ರಿಲ್ 6 ರವರೆಗೆ ಎಸ್.ಎಸ್.ಎಲ್.ಸಿ. ಪರೀಕ್ಷೆಗಳು ಜರುಗುತ್ತಿದ್ದು, ಪರೀಕ್ಷೆಗಳನ್ನು ವ್ಯವಸ್ಥಿತವಾಗಿ ಹಾಗೂ ಅಚ್ಚುಕಟ್ಟಾಗಿ ಜರುಗಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರದಂದು ಎಸ್‌ಎಸ್‌ಎಲ್‌ಸಿ ಪರೀಕ್ಷೆ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಎಸ್.ಎಸ್.ಎಲ್.ಸಿ. ಪರೀಕ್ಷೆಗಳನ್ನು ಪಾರದರ್ಶಕವಾಗಿ ನಡೆಸಬೇಕು. ಪರೀಕ್ಷೆಗಳಲ್ಲಿ ಯಾವುದೇ ಅಕ್ರಮಗಳು ನಡೆಯದಂತೆ ಹಾಗೂ ಲೋಪದೋಷಗಳಾಗದಂತೆ ಕ್ರಮ ವಹಿಸಬೇಕು. ಸಮಯ ಪರಿಪಾಲನೆಯು ಅತ್ಯವಶ್ಯವಾಗಿದ್ದು ಪ್ರತಿಯೊಂದು ಪರೀಕ್ಷಾ ಕೇಂದ್ರಗಳಿಗೆ ಗೋಡೆ ಗಡಿಯಾರ ಸುಸ್ಥಿತಿಯಲ್ಲಿರುವಂತೆ ನೋಡಿಕೊಳ್ಳಬೇಕು. ಪರೀಕ್ಷಾರ್ಥಿಗಳಿಗೆ ಸೂಕ್ತ ಆಸನದ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ಪರಿಣಾಮಕಾರಿ ವಿಚಕ್ಷಣ ಜಾಗೃತ ದಳಗಳನ್ನು ನೇಮಿಸಿ ಪರೀಕ್ಷಾ ಕಾರ್ಯ ಯಶಸ್ವಿಯಾಗಿ ನಡೆಯುವಂತೆ ಹಾಗೂ ಅವ್ಯವಹಾರಗಳು ನಡೆಯದಂತೆ ಕ್ರಮ ವಹಿಸಬೇಕೆಂದರು. ಪರೀಕ್ಷಾ ಕೇಂದ್ರಗಳ 200 ಮೀಟರ್ ಸುತ್ತಲೂ ನಿಷೇಧಾಜ್ಞೆ ಜಾರಿಗೊಳಿಸಲಾಗುವುದು. ಒಟ್ಟಾರೆಯಾಗಿ ಪರೀಕ್ಷೆಗಳು ಯಶಸ್ವಿಯಾಗಿ ಜರುಗುವಂತೆ ಕ್ರಮ ವಹಿಸಬೇಕೆಂದು ಸೂಚಿಸಿದರು.

(2 ನೇ ಪುಟಕ್ಕೆ)

## ವಿಶ್ವಶಾಂತಿ ಮಹಾಯಾಗದಲ್ಲಿ ಭಾಗವಹಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್



ಬೆಳಗಾವಿ: ಬೆಳಗಾವಿಯ ಬಸವನ ಗಲ್ಲಿಯಲ್ಲಿರುವ ಜಿನ ಮಂದಿರದ ಮೂಲನಾಯಕ ಶ್ರೀ 1008 ಭ. ನೇಮಿನಾಥ ತೀರ್ಥಂಕರ, ಶಿಖರಸ್ಥ ಶ್ರೀ 1008 ಭ. ಪಾರ್ಶ್ವನಾಥ ತೀರ್ಥಂಕರ ವೇದಿ ಪ್ರತಿಷ್ಠಾಪನೆಯ ಮಹಾ ಮಹೋತ್ಸವ ಹಾಗೂ ವಿಶ್ವಶಾಂತಿ ಮಹಾಯಾಗದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಮಂಗಳವಾರ ಭಾಗವಹಿಸಿದ್ದರು.

ಈ ಸಮಯದಲ್ಲಿ ಜಿನಮಂದಿರದ ಸಮಸ್ತ ಶ್ರಾವಕ, ಶ್ರಾವಕಿಯರು, ಪಂಚ ಕಮೀಟಿ, ಸರ್ವ ಟ್ರಸ್ಟಿ ಸದಸ್ಯರು, ಯುವ ಕಾಂಗ್ರೆಸ್ ಮುಖಂಡ ಮೃಣಾಲ ಹೆಬ್ಬಾಳಕರ್, ಪೂಜಾ ಕಮೀಟಿಯ ಸದಸ್ಯರು, ಮಹಿಳಾ ಮಂಡಳ ಹಾಗೂ ಸೇವಾದಳದವರು ಇದ್ದರು.

## ಕೆಳಮಟ್ಟದಲ್ಲಿಯೂ ಪೋಲೀಸ್ ಆಡಳಿತದ ವ್ಯವಸ್ಥೆ ಸುಧಾರಣೆಯಾಗಬೇಕು : ಆಯುಕ್ತ ಇಡಾ ಮಾರ್ಟಿನ್

ಬೆಳಗಾವಿ: ನಗರ ಪೊಲೀಸ್ ಇಲಾಖೆಯ ಮೇಲಾಧಿಕಾರಿಗಳು ಉತ್ತಮ ಆಡಳಿತ ನೀಡುತ್ತಿದ್ದಾರೆ. ಕೆಳಮಟ್ಟದಲ್ಲಿಯೂ ಪೊಲೀಸ್ ಆಡಳಿತದ ವ್ಯವಸ್ಥೆ ಸುಧಾರಣೆಯಾಗಬೇಕು ಎಂದು ನೂತನ ನಗರ ಪೊಲೀಸ್ ಆಯುಕ್ತ ಇಡಾ ಮಾರ್ಟಿನ್ ಹೇಳಿದರು.



ಮಂಗಳವಾರ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದರು. ಬೆಳಗಾವಿಯ ಬಗ್ಗೆ ತಿಳಿದುಕೊಂಡಿದ್ದೇನೆ. ಚಳಿಗಾಲದ ಅಧಿವೇಶನದಲ್ಲಿ ಇಲ್ಲಿ ಕೆಲಸ ಮಾಡಿದ ಅನುಭವ ಇದೆ. ಆಡಳಿತಾತ್ಮಕವಾಗಿ ನಗರ ಪೊಲೀಸ್ ಇಲಾಖೆಯಲ್ಲಿ ಸುಧಾರಣೆ ತರಲಾಗುವುದು ಎಂದರು.

ನಗರದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವುದರ ಜೊತೆಗೆ ಸಂಚಾರ ಸಮಸ್ಯೆ ಬಗೆ ಹರಿಸುವ ಪ್ರಯತ್ನ ಮಾಡುವೆ. ಇದಕ್ಕೆ ಸಾರ್ವಜನಕರ ಸಹಕಾರವೂ ಮುಖ್ಯವಾಗಿ ಬೇಕಾಗುತ್ತದೆ. ಅಪರಾಧ ಪ್ರಕರಣಗಳಿಗೆ ಕಡಿವಾಣ ಹಾಕಲು ಪೊಲೀಸ್ ಇಲಾಖೆ ಚುರುಕಾಗಿ ಕೆಲಸ ಮಾಡಲು ಪ್ರಯತ್ನಿಸುವೆ ಎಂದು ಹೇಳಿದರು. ಸೋಮವಾರ ನಾನು ನಗರ ಪೊಲೀಸ್ ಆಯುಕ್ತರಾಗಿ ಅಧಿಕಾರ ಸ್ವೀಕಾರ ಮಾಡಿದ್ದೇನೆ. ನಮ್ಮ ಸಿಬ್ಬಂದಿಗಳೊಂದಿಗೆ ಸಭೆ ನಡೆಸಿ ಮಾರ್ಗದರ್ಶನ ಪಡೆದಿದ್ದೇನೆ. ಬೆಳಗಾವಿ ನಗರದಲ್ಲಿ ಡಿಸಿಪಿಗಳಿಬ್ಬರೂ ಉತ್ತಮ ಕೆಲಸ ಮಾಡಿದ್ದಾರೆ ಎನ್ನುವ ಅಭಿಪ್ರಾಯ ವ್ಯಕ್ತವಾಗಿದೆ. ಕೇವಲ ನಮ್ಮ ಕಡೆಯಿಂದ ಕಾನೂನು ಸುವ್ಯವಸ್ಥೆ ಕಾಪಾಡಲು ಎಲ್ಲ ನಾಗರಿಕರ ಸಹಕಾರ ಪೊಲೀಸರಿಗೆ ಮಾಡಿದರೆ ನಗರವು ಶಾಂತವಾಗಿ ಇಡಲು ಸಾಧ್ಯ ಎಂದರು. ಸಾರ್ವಜನಕರ ಸಮಸ್ಯೆಯನ್ನು ಬಗೆ ಹರಿಸಲು ವಿಳಂಬ ಮಾಡಿ ತಪ್ಪು ಮಾಡುವ ಅಧಿಕಾರಿಗಳ ವಿರುದ್ಧ ಮುಲ್ಲಾಜಿಲ್ಲದೆ ಕ್ರಮ ಜರುಗಿಸಲಾಗುವುದು. ಸಂಚಾರ ಸಮಸ್ಯೆಯ ಬಗ್ಗೆಯೂ ಸಂಚಾರ ಡಿಸಿಪಿಯೊಂದಿಗೆ ಸಭೆ ನಡೆಸಿದ್ದೇನೆ ಆದಷ್ಟು ಬೇಗ ಸಮಸ್ಯೆಯನ್ನು ಬಗೆ ಹರಿಸುವ ಪ್ರಯತ್ನ ಮಾಡಲಾಗುವುದು ಎಂದರು.

ಈ ಸಂದರ್ಭದಲ್ಲಿ ಡಿಸಿಪಿ ರೋಹನ್ ಜಗದೀಶ್, ಎಸಿಪಿ ಸದಾಶಿವ ಕಟ್ಟಿಮನ ಇದ್ದರು.

# ಜಿಲ್ಲೆಯ ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ : ಸಿಇಒ ರಾಹುಲ್ ರತ್ನಂ ಪಾಂಡೆಯ

ಕೊಪ್ಪಳ, ಮಾರ್ಚ್ 19: ಜಿಲ್ಲೆಯ 7 ತಾಲ್ಲೂಕುಗಳು ಬರಪೀಡಿತ ತಾಲ್ಲೂಕುಗಳು ಎಂದು ಸರ್ಕಾರ ಘೋಷಿಸಿದ್ದು, ನಾಲ್ಕು ತಾಲ್ಲೂಕುಗಳ 17 ಗ್ರಾಮ ಪಂಚಾಯತಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು, 33 ಸಮಸ್ಯಾತ್ಮಕ ಗ್ರಾಮಗಳಿಗೆ ಹಾಗೂ ಇತರೆ ಜನವಸತಿ ಪ್ರದೇಶಗಳಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೆಯ ಅವರು ತಿಳಿಸಿದರು.

ಮಂಗಳವಾರದಂದು ಜಿಲ್ಲಾ ಪಂಚಾಯತಿಯ ಜೆ.ಎಚ್.ಪಟೇಲ್ ಸಭಾಂಗಣದಲ್ಲಿ ಜನವಸತಿ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಮತ್ತು ಬರ ನಿರ್ವಹಣೆಗೆ ಸಂಬಂಧಿಸಿದಂತೆ ಕರೆಯಲಾಗಿದ್ದ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಜಿಲ್ಲೆಯ ಕೊಪ್ಪಳ, ಕುಷ್ಟಗಿ, ಯಲಬುರ್ಗಾ ಮತ್ತು ಕುಕನೂರು ತಾಲ್ಲೂಕುಗಳ ಗ್ರಾಮ ಪಂಚಾಯತಿಗಳ ಪೈಕಿ 17 ಗ್ರಾಮ



ಪಂಚಾಯತಿಗಳ ವ್ಯಾಪ್ತಿಯಲ್ಲಿ ಬರುವ 8 ಗ್ರಾಮಗಳಲ್ಲಿ 10 ಟ್ಯಾಂಕರ್‌ಗಳ ಮೂಲಕ ಶುದ್ಧ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತಿದೆ. ಇತರೆ 25 ಗ್ರಾಮಗಳಿಗೆ 28 ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆ ಪಡೆದು ಕುಡಿಯುವ ನೀರು ಪೂರೈಸಲಾಗುತ್ತಿದೆ. ಗಂಗಾವತಿ ತಾಲ್ಲೂಕಿನ ಗ್ರಾಮಗಳಲ್ಲಿರುವ ಕೆರೆಗಳನ್ನು ತುಂಗಭದ್ರಾ ನದಿ ನೀರಿನ ಮೂಲಕ ತುಂಬಿಸಲಾಗಿದ್ದು, ಪ್ರಸ್ತುತ ಹಂತದಲ್ಲಿ ಕುಡಿಯುವ ನೀರಿನ ಯಾವುದೇ ಸಮಸ್ಯೆ ಇರುವುದಿಲ್ಲ. ಕನಕಗಿರಿ ಮತ್ತು ಕಾರಟಗಿ ತಾಲ್ಲೂಕುಗಳಲ್ಲಿ ಸಹ ಸದ್ಯ ಕುಡಿಯುವ ನೀರಿನ ಸಮಸ್ಯೆ ಕಂಡು ಬಂದಿಲ್ಲ. ಕನಕಗಿರಿ ತಾಲ್ಲೂಕಿನ ಗ್ರಾಮಗಳಲ್ಲಿ 26 ಬೋರ್‌ವೆಲ್‌ಗಳನ್ನು ಫ್ಲಷಿಂಗ್ ಮಾಡಲು ಗುರುತಿಸಿದ್ದ, ಬೋರ್ವೆಲ್‌ಗಳನ್ನು ಫ್ಲಷಿಂಗ್ ಮಾಡುವುದರಿಂದ ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗುವುದಿಲ್ಲ ಎಂದು ಸಿಇಒ ಅವರು ಮಾಹಿತಿ ನೀಡಿದರು.

ಬರಪೀಡಿತ ತಾಲೂಕುಗಳಲ್ಲಿ ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೊಳ್ಳಲು ಸರ್ಕಾರದಿಂದ ಪ್ರತಿ ತಾಲೂಕಿಗೆ ರೂ. 25 ಲಕ್ಷಗಳಂತೆ ಒಟ್ಟು 7 ತಾಲೂಕುಗಳಿಗೆ ರೂ. 175 ಲಕ್ಷಗಳು ಹಾಗೂ ತುರ್ತು ಕುಡಿಯುವ ನೀರಿನ ಕಾಮಗಾರಿಗಾಗಿ ಕೊಪ್ಪಳ ಜಿಲ್ಲೆಗೆ ರೂ. 140 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ಬರ ನಿರ್ವಹಣೆಗಾಗಿ ಡಿಸಿ ಪಿಡಿ ಖಾತೆಗೆ 16 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ. ಈ ಅನುದಾನದಡಿ ನಿಯಮಾನುಸಾರ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಕ್ರಿಯಾ ಯೋಜನೆಯನ್ನು ರೂಪಿಸಿ (2 ನೇ ಪುಟಕ್ಕೆ)